ದಿನಾಂಕ:18.06.2022ರಂದು ಬೆಳ್ಳಿಗ್ಗೆ 10.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ **ಶ್ರೀ ಲಿಂಗಣ್ಣ ಗುಂಡಳ್ಳಿ,** ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರವನ್ನು ದಿನಾಂಕ: 20.06.2022ರಂದು ಸಲ್ಲಿಸುವ ಕುರಿತು.

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ವೆಂಕಟೇಶ್ ಮೂರ್ತಿ
3. ಶ್ರೀಮತಿ ವರಲಕ್ಷ್ಮಿ
4. ಶ್ರೀ ಸವಿತಾ, ಎಇ ಬೆಸ್ಕಾಂ,
5. ಶ್ರೀ ಅನಿಕೇಶ್, ಹಿರಿಯ ಆರೋಗ್ಯ ಪರಿವೀಕ್ಷರು
6. ಶ್ರೀ ಶಿವಕುಮಾರಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ಮಹೇಶ್,
8. ಶ್ರೀ ಸುಬ್ರಮಣಿ, ಅಸಸರು,
9. ಶ್ರೀ ಪವನ್. ಕೆ.ಎಂ. ಬಿ.ಡಬ್ಲ್ಯೂ.ಎಸ್.ಎಸ್.ಬಿ.
10. ಶ್ರೀ ಚನ್ನಕೇಶವ, ಮಾರ್ಷಲ್,
11. ಶ್ರೀ ವಿಜಯಕುಮಾರ್, ಸದಸ್ಯರು
12. ಶ್ರೀ ಶಿವಕುಮಾರ್
13. ಶ್ರೀ ಕೆ.ಹೆಚ್. ಗುರುರಾಜ್
14. ಶ್ರೀ ಲಿಂಗನಗೌಡ

ಶ್ರೀ ಪೂಜಾರಪ್ಪ, ಸಹಾಯಕ ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ವಾರ್ಡ್ ನಂ. 107ರ ಪ್ರದೇಶ ವ್ಯಾಪ್ತಿಯಲ್ಲಿ ಹೇರಳವಾಗಿ ರಸ್ತೆ ಗುಂಡಿ ಬಿದ್ದು, ಜನ ಸಾಮಾನ್ಯರು ನಡೆದಾಡಲು ತೊಂದರೆಯಾಗಿದೆ ಎಂದು ಒಕ್ಕರಲುನಿಂದ ಸಭೆಗೆ ತಿಳಿಸಿರುತ್ತಾರೆ. ಆದುದರಿಂದ ಗುಂಡಿ ಮುಚ್ಚುವ ಕೆಲಸ ಪೂರ್ಣಗೊಂಡಿದ್ದು, ಡಾಂಬರ್ ಅಳವಡಿಸುವ ಕೆಲಸ ಪ್ರಗತಿಯಲ್ಲಿರುತ್ತದೆ.

2. ಬೀದಿ ದೀಪಗಳ ಬಗ್ಗೆ ಸಮರ್ಪಕವಾಗಿ ಕೆಲಸ ನಡೆಯುತ್ತಿಲ್ಲವೆಂದು ಸಭೆಯ ಗಮನಕ್ಕೆ ತಂದಾಗ, ಸಂಬಂಧಿಸಿದ ವಾರ್ಡ್ ಅಭಿಯಂತರರುಗಳಿಗೆ ಮಾನ್ಯ ನೋಡಲ್ ಅಧಿಕಾರಿಗಳೆ ದೂರವಾಣಿ ಮುಖಾಂತರ ಚರ್ಚಿಸಿ, ಕೆಲಸವನ್ನು ತುರ್ತಾಗಿ ಬೀದಿ ದೀಪಗಳನ್ನು ನಿರ್ವಣೆ ಮಾಡುವಂತೆ ಜಮಿಲ್ ಅಭಿಯಂತರರಿಗೆ ಸೂಚಿಸಲಾಗಿದೆ.

3. ನೋಡಲ್ ಅಧಿಕಾರಿಗಳು, ವಾರ್ಡಿನಲ್ಲಿ ಒಣಗಿರುವ ಮತ್ತು ಕಡಿದಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸುವಂತೆ ಸೂಚಿಸಿದರು. ಸಭೆಯಲಿದ್ದ ಸದಸ್ಯರು ಹಾಗೂ ನೋಡಲ್ ಅಧಿಕಾರಿಗಳು ರಸ್ತೆಯಲ್ಲಿ ಬಿದ್ದಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ವಿಳಂಭ ಮಾಡುತ್ತಿರುವ ಬಗ್ಗೆ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರಿಗೆ ಅರಣ್ಯ ಇಲಾಖೆ ಅಧಿಕಾರಿಗಳಿಂದ ಕೆಲಸ ಪ್ರಗತಿಯಲ್ಲಿದ್ದು, ಇತ್ತೀಚಿನ ದಿನಗಳಲ್ಲಿ ಬಿದ್ದ ಭಾರಿ ಮಳೆಗಳಿಂದ ರಸ್ತೆಯ ಇಕ್ಕೆಲಗಳಲ್ಲಿ ಮರದ ಕೊಂಬೆಗಳು ಬಿದ್ದಿರುವುದನ್ನು ತುರ್ತಾಗಿ ಬೇರೆಡೆಗೆ ಸಾಗಿಸಲು ಕ್ರಮ ವಹಿಸಿರುತ್ತಾರೆ. ಎಂದು ಸಂಬಂಧಪಟ್ಟವರಿಂದ ಮಾಹಿತಿ ಪಡೆಯಲಾಗಿರುತ್ತದೆ.

**ಪು.ತಿ.ನೋ.**

Scanned by CamScanner

4. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಪೈಪ್ ಅಳವಡಿಸುವ ಕಾಮಗಾರಿಯನ್ನು ನಿರ್ವಹಿಸಲಾಗಿರುತ್ತದೆ. ಆದರೆ ಮಳೆ ಬಂದ ಮೇಲೆ ಪೈಪ್ ಅಳವಡಿಸಿರುವ ಜಾಗದಲ್ಲಿ ಮಣ್ಣು ಕುಸಿದಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವುದಾಗಿ ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಕಾಮಗಾರಿಯು ಪ್ರಗತಿಯಲ್ಲಿದ್ದು, ಕುಸಿದಿರುವ ಜಾಗವನ್ನು ದುರಸ್ಥಿಪಡಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

5. ವಾರ್ಡ್ ನಂ. 107ರ ಪ್ರದೇಶ ವ್ಯಾಪ್ತಿಯಲ್ಲಿ 11ನೇ ಮುಖ್ಯ ರಸ್ತೆ ಹಾಗೂ ಇತರೆ ಅಡ್ಡ ರಸ್ತೆಗಳ ಹಾಯ್ದು ಭಾಗಳಲ್ಲಿ ಅನುಪಯುಕ್ತ ವಸ್ತುಗಳು ಸಂಗ್ರಹಗೊಂಡಿರುವುದರಿಂದ ಜನಸಾಮಾನ್ಯರ ಸಂಚಾರಕ್ಕೆ ತೊಂದರೆಯಾಗಿದೆ ಎಂದು ಮರಿಲಕ್ಕಪ್ಪ ರವರು ಸಭೆಗೆ ತಂದಿರುತ್ತಾರೆ. ಈಗಾಗಲೇ ದಿನನಿತ್ಯದಲ್ಲಿ ಸಿಲ್ಟ್ ಅಂಡ್ ಟ್ರಾಕ್ಟರ್ ಕೆಲಸ ನಿರ್ವಹಿಸುತ್ತಿದ್ದು, ಹಂತ ಹಂತವಾಗಿ ಅನುಪಯುಕ್ತ ವಸ್ತುಗಳನ್ನು ತೆರವುಗೊಳಿಸುವ ಕೆಲಸ ಹಂತ ಹಂತವಾಗಿ ತಂತ್ರಾಂಶದಲ್ಲಿ ಅಫ್‌ಲೋಡ್ ಮಾಡುವಂತೆ ಕೇಂದ್ರ ಕಛೇರಿಯಿಂದ ಆದೇಶಿಸಿರುವ ಪ್ರಯುಕ್ತ ಪ್ರತಿ ದಿನ ತಂತ್ರಾಂಶದಲ್ಲಿ ಅಫ್ ಲೋಡ್ ಮಾಡಲು ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಆದೇಶಿಸಿರುತ್ತಾರೆ.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

25/4/22

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು

Scanned by CamScanner